ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಹೊಸದಾಗಿ ವಿತರಣೆಯಾದ ಪಡಿತರ ಚೀಟಿಗಳ ಕುರಿತು

ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-

960(1016) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದೆರಡು ವರ್ಷಗಳಿಂದ ವಿತರಣೆಯಾದ ಹೊಸ ಪಡಿತರ ಚೀಟಿಗಳೆಷ್ಟು; ಎಷ್ಟು ಫಲಾನುಭವಿಗಳಿಗೆ ಬಿಪಿಎಲ್ ಪಡಿತರ ಚೀಟಿ ವಿತರಿಸಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಪಡಿತರ ಕೇಂದ್ರಗಳಲ್ಲಿ ಬಯೋಮೆಟ್ರಿಕ್ ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ ಎನ್ನುವ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ರಾಜ್ಯದ ನ್ಯಾಯಬೆಲೆ ಅಂಗಡಿಗಳ ಪರವಾನಗಿ ಮತ್ತು ನವೀಕರಣದ ಕುರಿತಾಗಿ ಇರುವ ಮಾನದಂಡಗಳೇನು; ಹೊಸದಾಗಿ ಜನಸಂಖ್ಯೆಗೆ ಅನುಗುಣವಾಗಿ ಎಷ್ಟು ಹೊಸ ಪರವಾನಗಿ ನೀಡಲಾಗಿದೆ;

(ಈ) ಕೋವಿಡ್ ಸಂದರ್ಭದಲ್ಲಿ ಜನರಿಗೆ ಉಚಿತವಾಗಿ ಅಕ್ಕಿ ಮತ್ತು ಬೇಳೆಗಳನ್ನು ನ್ಯಾಯಬೆಲೆ ಅಂಗಡಿಯಲ್ಲಿ ವಿತರಿಸಲಾಗಿದೆಯೇ? (ಸಂಪೂರ್ಣ ಮಾಹಿತಿ ನೀಡುವುದು)